## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ 2010-11ನೇ ಸಾಲಿನ 1ನೇ ವರದಿಯಲ್ಲಿ ಸಿ ಅಂಡ್ ಎ.ಜಿ.ವರದಿಯ ಆಕ್ಷೇಪಣಾ ಉಪ ಕಂಡಿಕೆ ಸಂಖ್ಯೆ: 2.4.7.1/2006-07ರ ಪ್ರಕರಣದಲ್ಲಿ ಭಾಗಿಯಾಗಿರುವ 12 ಜನ ಅಧಿಕಾರಿ / ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ - ಇಲಾಖಾ ವಿಚಾರಣಾಧಿಕಾರಿಗಳನ್ನು ಬದಲಾಯಿಸುವ ಬಗ್ಗೆ - ಆದೇಶ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರ ಪತ್ರ ಸಂಖ್ಯೆ: ಕೊಜಿಪಂ / ಶಿಸ್ತು / 2012-13, ದಿನಾಂಕ: 19.01.2013.
2. ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 130 ಜಿಪಅ 2013, ದಿನಾಂಕ: 14.05.2013.
3. ಶ್ರೀ ಹೇಮಗಿರಿ, ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 18.06.2013, ಶ್ರೀ ಎಸ್.ಡಿ.ಕೇಶವಮೂರ್ತಿ, ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 20.06.2013, ಶ್ರೀ ಆರ್. ನರಸಿಂಹಮೂರ್ತಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 13.06.2013, ಶ್ರೀ ಕೆ.ರವಿಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 20.06.2013, ಶ್ರೀ ಅಶೋಕ ರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ) ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 03.07.2013, ಶ್ರೀ ಎಲ್.ಶ್ರೀಕಂಠಯ್ಯ, ಸಹಾಯಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 19.06.2013 ಮತ್ತು ಶ್ರೀ ಜೆ.ವಿಶ್ವನಾಥ್, ಸಹಾಯಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 21.06.2013,
4. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 130 ಜಿಪಅ 2013, ದಿನಾಂಕ: 27.07.2013
5. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ರವರ ಮನವಿ ದಿನಾಂಕ: 12.08.2013

**ಪ್ರಸ್ತಾವನೆ:**

ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ 2010-11ನೇ ಸಾಲಿನ 1ನೇ ವರದಿಯಲ್ಲಿ 2006-07ನೇ ಸಾಲಿನ ಸಿ ಅಂಡ್ ಎ.ಜಿ.

- 2

ವರದಿಯ ಆಕ್ಷೇಪಣಾ ಉಪ ಕಂಡಿಕೆ ಸಂಖ್ಯೆ: 2.4.7.1/2006-07ರಲ್ಲಿ 2004-06ರ ಅವಧಿಯಲ್ಲಿ ಮಡಿಕೇರಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವ್ಯಾಪ್ತಿಯ ಸೋಮವಾರಪೇಟೆ, ವಿರಾಜಪೇಟೆ ಮತ್ತು ಮಡಿಕೇರಿ ಉಪ-ವಿಭಾಗಗಳಲ್ಲಿ RIDF-9 ಮತ್ತು 10ರ ಕೈಗೊಳ್ಳಲಾಗಿರುವ 11 ರಸ್ತೆ ಅಭಿವೃದ್ಧಿ ಕಾಮಗಾರಿಗಳ ಪೈಕಿ 4 ರಸ್ತೆ ಅಭಿವೃದ್ಧಿ ಕಾಮಗಾರಿಗಳು ಅಪೂರ್ಣಗೊಂಡಿದ್ದು, ಸದರಿ 4 ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ನಿರ್ಲಕ್ಷ್ಯವಹಿಸಿದ ಈ ಕೆಳಕಂಡ 12 ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಪ್ರಸ್ತಾವನೆಯೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4)ಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರು ಸಲ್ಲಿಸಿದ್ದರು:-

1. ಶ್ರೀ ಹೇಮಗಿರಿ, ಕಾರ್ಯಪಾಲಕ ಇಂಜಿನಿಯರ್,
2. ಶ್ರೀ ಎಸ್.ಡಿ.ಕೇಶವಮೂರ್ತಿ, ಕಾರ್ಯಪಾಲಕ ಇಂಜಿನಿಯರ್
3. ಶ್ರೀ ಟಿ.ಬಿ.ಪೂಣಚ್ಚ, ಕಿರಿಯ ಇಂಜಿನಿಯರ್,
4. ಶ್ರೀ ಕೆ.ರವಿಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್,
5. ಶ್ರೀ ಅಶೋಕ ರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ)
6. ಶ್ರೀ ಪರಮೇಶ್ವರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್,
7. ಶ್ರೀ ಎಸ್.ಹೆಚ್.ಪ್ರಭು, ಸಹಾಯಕ ಕಾರ್ಯಪಾಲಕ ಇಂಜಿನಿಯರ್,
8. ಶ್ರೀ ಆರ್.ನರಸಿಂಹಮೂರ್ತಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್,
9. ಶ್ರೀ ಎಲ್.ಶ್ರೀಕಂಠಯ್ಯ, ಸಹಾಯಕ ಇಂಜಿನಿಯರ್,
10. ಶ್ರೀ ಜೆ.ವಿಶ್ವನಾಥ್, ಸಹಾಯಕ ಇಂಜಿನಿಯರ್,
11. ಶ್ರೀ ಎನ್.ಸಲೀಂ, ಕಿರಿಯ ಇಂಜಿನಿಯರ್,
12. ಶ್ರೀ ಜಿ.ಡಿ. ಸೋಮಯ್ಯ, ಕಿರಿಯ ಇಂಜಿನಿಯರ್,

ಮೇಲ್ಕಂಡ ಅಪಾದಿತ ಅಧಿಕಾರಿ / ನೌಕರರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 14.05.2013ರಲ್ಲಿ ಕಾರಣ ಕೇಳುವ ನೋಟೀಸ್‌ನ್ನು ಜಾರಿ ಮಾಡಲಾಗಿತ್ತು.

ಅಪಾದಿತ ಅಧಿಕಾರಿ / ನೌಕರರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕಗಳಂದು ಸಲ್ಲಿಸಿರುವ ಲಿಖಿತ ಹೇಳಿಕೆಗಳಲ್ಲಿ ಅವರುಗಳ ವಿರುದ್ಧ ಮಾಡಲಾದ ಆರೋಪಗಳನ್ನು ನಿರಾಕರಿಸಿರುತ್ತಾರೆ.

ಆದರೆ, ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲಾ 12 ಜನ ಅಪಾದಿತ ಅಧಿಕಾರಿ / ನೌಕರರು 2004-06ರ ಅವಧಿಯಲ್ಲಿ ಮಡಿಕೇರಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವ್ಯಾಪ್ತಿಯ ಸೋಮವಾರಪೇಟೆ, ವಿರಾಜಪೇಟೆ ಮತ್ತು ಮಡಿಕೇರಿ ಉಪ-ವಿಭಾಗಗಳಲ್ಲಿ RIDF-9 ಮತ್ತು 10ರ ಕೈಗೊಳ್ಳಲಾಗಿರುವ 11 ರಸ್ತೆ ಅಭಿವೃದ್ಧಿ ಕಾಮಗಾರಿಗಳ ಪೈಕಿ 4 ರಸ್ತೆ ಅಭಿವೃದ್ಧಿ ಕಾಮಗಾರಿಗಳು ಅಪೂರ್ಣಗೊಳ್ಳುವಲ್ಲಿ ನಿರ್ಲಕ್ಷ್ಯವಹಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನಲೆಯಲ್ಲಿ, ಇವರುಗಳ ಪೈಕಿ ಶ್ರೀ ಎಸ್.ಡಿ.ಕೇಶವಮೂರ್ತಿ, ಅಂದಿನ ಕಾರ್ಯಪಾಲಕ ಇಂಜಿನಿಯರ್ ರವರು ದಿನಾಂಕ: 31.03.2012ರಂದು ಮತ್ತು ಶ್ರೀ ಕೆ.ರವಿಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ದಿನಾಂಕ:

31.07.2012ರಂದು ಸೇವೆಯಿಂದ ನಿವೃತ್ತಿಗೊಂಡಿರುವುದರಿಂದ ಇವರುಗಳ ವಿರುದ್ಧ ಸಿವಿಲ್ ಸೂಟ್ ಹೂಡಿ ಇವರಿಂದ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟವನ್ನು ವಸೂಲಿ ಮಾಡಲು ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರಿಗೆ ನಿರ್ದೇಶಿಸಲು ಹಾಗೂ ಉಳಿದಂತೆ 10ಜನ ಅಪಾದಿತ ಅಧಿಕಾರಿ / ನೌಕರರುಗಳ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆ ಜರುಗಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಸರ್ಕಾರದ ಆದೇಶಲ್ಲಿ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ರವರು ಅನಾರೋಗ್ಯದ ನಿಮಿತ್ಯ ಸದರಿ ಪ್ರಕರಣದಲ್ಲಿ ವಿಚಾರಣೆ ನಡೆಸಲು ಸಾಧ್ಯವಾಗುವುದಿಲ್ಲವೆಂದು ಕೋರಿಕೊಂಡಿರುತ್ತಾರೆ.

ಆದ್ದರಿಂದ ಸದರಿ ಪ್ರಕರಣದಲ್ಲಿ ವಿಚಾರಣೆ ನಡೆಸಲು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ರವರ ಬದಲಾಗಿ ಶ್ರೀ ಎಸ್.ವೈ.ಕುಂಬಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 130 ಜಿಪಅ 2013, ಬೆಂಗಳೂರು**
**ದಿನಾಂಕ: 17.10.2013**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-13ರನ್ವಯ ಈ ಕೆಳಕಂಡ ಅಧಿಕಾರಿ / ನೌಕರರು ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎಸ್.ವೈ.ಕುಂಬಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿದೆ;-

1. ಶ್ರೀ ಹೇಮಗಿರಿ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಡಿಕೇರಿ
2. ಶ್ರೀ ಟಿ.ಬಿ.ಪೂಣಚ್ಚ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ವಿರಾಜಪೇಟೆ
3. ಶ್ರೀ ಅಶೋಕ ರೆಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ವಿರಾಜಪೇಟೆ

4. ಶ್ರೀ ಪರಮೇಶ್ವರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ವಿರಾಜಪೇಟೆ
5. ಶ್ರೀ ಜಿ.ಡಿ. ಸೋಮಯ್ಯ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ವಿರಾಜಪೇಟೆ
6. ಶ್ರೀ ಎಸ್.ಹೆಚ್.ಪ್ರಭು, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಸೋಮವಾರಪೇಟೆ
7. ಶ್ರೀ ಜಿ.ವಿಶ್ವನಾಥ್, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಸೋಮವಾರಪೇಟೆ
8. ಶ್ರೀ ಎನ್.ಸಲೀಂ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಸೋಮವಾರಪೇಟೆ
9. ಶ್ರೀ ಆರ್.ನರಸಿಂಹಮೂರ್ತಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಮಡಿಕೇರಿ
10. ಶ್ರೀ ಎಲ್.ಶ್ರೀಕಂಠಯ್ಯ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಮಡಿಕೇರಿ

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-11ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

17.x.13

ಇವರಿಗೆ:
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ / ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,

--5

4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದ), ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ.
6. ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 394, 18ನೇ ಮೇನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-95 (ಮೊಬೈಲ್ ಸಂಖ್ಯೆ : 9900245450).
7. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 1242, 8ನೇ ಮುಖ್ಯ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40. (ದೂರವಾಣಿ ಸಂಖ್ಯೆ : 080-23394245)
8. ಸಹಾಯಕ ಕಾರ್ಯದರ್ಶಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ – ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
9. ಸಂಬಂಧಿಸಿದ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರ ಮುಖಾಂತರ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).
11. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ
13. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಅಪರ ಕಾರ್ಯದರ್ಶಿ (ಆಡಳತ) ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು-ಬಿ)
15. ಮೇಲ್ವಿಚಾರಕರು, ಗಣಕಕೇಂದ್ರ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸಲು ಕಳುಹಿಸಿದೆ.
16. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.